ಮೇಳದಲ್ಲಿ ವಿಶೇಷ ಪ್ರಾತ್ಯಕ್ಷಿಕೆ

ಪ್ರಜಾವಾಣಿ ವಾರ್ತೆ

ಬೆಂಗಳೂರು: ಗಾಂಧಿ ಕೃಷಿ ವಿಜ್ಞಾನ ಕೇಂದ್ರದ (ಜಿಕೆವಿಕೆ) ಆವರಣದಲ್ಲಿ ನಡೆಯಲಿರುವ ನಾಲ್ಕು ದಿನಗಳ ಕೃಷಿ ಮೇಳದಲ್ಲಿ ಕೃಷಿ ವಿಜ್ಞಾನಿಗಳು ಅಭಿವೃದ್ಧಿಪಡಿಸಿದ 62 ತಂತ್ರಜ್ಞಾನಗಳನ್ನು ಪ್ರದರ್ಶಿಸಲಾಗುತ್ತಿದೆ. ಪ್ರದರ್ಶನದ ಜತೆಗೆ, ಪ್ರಾತ್ಯಕ್ಷಿಕೆಗಳೂ ಇರುತ್ತವೆ. ಹಾಗಾಗಿ, ಆ ತಂತ್ರಜ್ಞಾನಗಳ ಪ್ರಯೋಜನ ಕುರಿತು ರೈತರಿಗೆ ಮನವರಿಕೆ ಮಾಡಿಕೊಡಲಾಗುತ್ತದೆ. ಮೇಳದಲ್ಲಿ 700ಕ್ಕೂ ಹೆಚ್ಚು ಪ್ರದರ್ಶನ ಮಳಿಗೆಗಳಿರುತ್ತವೆ. ವಿಶ್ವವಿದ್ಯಾಲಯದ 'ಹೆಲ್ಪ್ ಡೆಸ್ಕ್'ನಿಂದ ಹಿಡಿದು ಮಣ್ಣಿನ ಗುಣಧರ್ಮ, ಪೋಷಕಾಂಶಗಳ ಲಭ್ಯತೆ, ನೀರಿನ ಲಭ್ಯತೆ ಮತ್ತು ಗುಣಮಟ್ಟ, ಬೇಸಾಯ ಮಾಡುವ ಬೆಳೆಗೆ ನೀರಿನ ಮತ್ತು ಪೋಷಕಾಂಶ ಗಳ ಅವಶ್ಯಕತೆ, ಕಳೆಗಳ ನಿರ್ವಹಣೆ ನಿಖರ ಬೇಸಾಯದಲ್ಲಿ ಬೆಳೆ ಉತ್ಪಾದನೆಯಲ್ಲಿ ಮಾಹಿತಿ ಮತ್ತು ತಂತ್ರಜ್ಞಾನ ಆಧಾರಿತ ಸಂಪನ್ಮೂಲ ಬಳಕೆಯಿಂದ ಹೆಚ್ಚಿನ ಇಳುವರಿ ಪಡೆಯುವ ಕುರಿತು ಮಾಹಿತಿ ನೀಡುವ ತಜ್ಞರು ಮೇಳದಲ್ಲಿರುತ್ತಾರೆ. ರೈತರು ಸಂಬಂಧಿಸಿದ ತಜ್ಞರಿಂದ ಮಾಹಿತಿ ಪಡೆಯಬಹುದು. ಬೀಜ, ಗೊಬ್ಬರ, ನರ್ಸರಿಯ ಜತೆಗೆ, ಜೆಸಿಬಿ, ಟ್ರ್ಯಾಕ್ಟರ್‌ನಂತಹ ಕೃಷಿ ಪೂರಕ ಯಂತ್ರಗಳ ಪ್ರದರ್ಶನ, ಮಾರಾಟವಿರುತ್ತದೆ.

ಹೆಬ್ಬಾಳದ ಗಾಂಧಿ ಕೃಷಿ ವಿಜ್ಞಾನ ಕೇಂದ್ರದ ಆವರಣದಲ್ಲಿ 24ರಿಂದ ಕೃಷಿಮೇಳ

'ಬರ–ನೆರೆ ತಾಳಿಕೊಳ್ಳುವ ಕೃಷಿ ಪದ್ಧತಿಗೆ ಆದ್ಯತೆ'

• ಗುರು ಪಿ.ಎಸ್.

ಪ್ರಜಾವಾಣಿ ಸಂದರ್ಶನ

ಡಾ. ಎಸ್. ರಾಜೇಂದ್ರಪ್ರಸಾದ್
ಕೃಷಿ ವಿ.ವಿ ಕುಲಪತಿ

ಬೆಂಗಳೂರು: ಬೆಂಗಳೂರು ಕೃಷಿ ವಿಶ್ವವಿದ್ಯಾಲಯವು ಜಿಕೆವಿಕೆ ಆವರಣದಲ್ಲಿ ಇದೇ 24ರಿಂದ 27ರವರೆಗೆ ಕೃಷಿ ಮೇಳವನ್ನು ಆಯೋಜಿಸಿದೆ. 'ನಿಖರ ಕೃಷಿ ಮತ್ತು ಸುಸ್ಥಿರ ಅಭಿವೃದ್ಧಿ' – ಈ ವರ್ಷದ ಘೋಷವಾಕ್ಯ. ನೆರೆ ಮತ್ತು ಬರ ಪರಿಸ್ಥಿತಿಯಿಂದ ಸಂಕಷ್ಟಕ್ಕೀಡಾಗಿರುವ ರೈತ ಸಮುದಾಯಕ್ಕೆ ಪರ್ಯಾಯ ಮಾರ್ಗಗಳನ್ನು ಪರಿಚಯಿಸುವುದು ಮೇಳದ ಉದ್ದೇಶ. ಕೃಷಿ ಕ್ಷೇತ್ರ ಎದುರಿಸುತ್ತಿರುವ ಬಿಕ್ಕಟ್ಟು ಮತ್ತು ಸವಾಲುಗಳಿಗೆ ಪರಿಹಾರ ಒದಗಿಸುವ ನಿಟ್ಟಿನಲ್ಲಿ ಮೇಳದ ಕಾರ್ಯಕ್ರಮ ರೂಪಿಸಲಾಗಿದೆ. ಈ ಕುರಿತು ವಿಶ್ವವಿದ್ಯಾಲಯದ ಕುಲಪತಿ ಡಾ. ಎಸ್. ರಾಜೇಂದ್ರ ಪ್ರಸಾದ್ 'ಪ್ರಜಾವಾಣಿ'ಜೊತೆ ಮಾತನಾಡಿದ್ದಾರೆ.

● 'ನಿಖರ ಕೃಷಿ'ಯ ಪರಿಕಲ್ಪನೆ ವಿವರಿಸಿ. ಅದು ಬರಗಾಲಕ್ಕೆ ಎಷ್ಟು ಸಹಕಾರಿ?

ಬರಪೀಡಿತ ಪ್ರದೇಶಗಳಲ್ಲಿ ಲಭ್ಯವಾಗುವಷ್ಟು ನೀರನ್ನು ಸಮರ್ಪಕವಾಗಿ ಬಳಸಿಕೊಳ್ಳುವ ವಿಧಾನಕ್ಕೆ 'ನಿಖರ ಕೃಷಿ' ಎನ್ನುತ್ತೇವೆ. ಬೆಳೆಗೆ ಅಗತ್ಯವಿರುವಷ್ಟೇ ನೀರು ಮತ್ತು ಗೊಬ್ಬರವನ್ನು ಪೂರೈಸುವುದು (ನೀರು ಮತ್ತು ಗೊಬ್ಬರವನ್ನು ಬೆರೆಸಿ, ದ್ರವ ರೂಪದಲ್ಲಿ ಬೆಳೆಗೆ ಪೂರೈಸುವುದು). ಕಡಿಮೆ ನೀರಿನಲ್ಲಿ ಕೃಷಿ ಮಾಡುವುದು ಕೂಡ ನಿಖರ ಕೃಷಿ ಪರಿಕಲ್ಪನೆಯ ಭಾಗವಾಗಿದೆ. ಇಂಥ ಚಟುವಟಿಕೆಗಳ ಬಗ್ಗೆ ಮೇಳದಲ್ಲಿ ಪ್ರಾತ್ಯಕ್ಷಿಕೆಗಳಿರುತ್ತವೆ.

● ರಾಜ್ಯದಲ್ಲಿ ಅತಿ ಹೆಚ್ಚು ಸಣ್ಣ ಮತ್ತು ಅತಿ ಸಣ್ಣ ಹಿಡುವಳಿದಾರರಿದ್ದಾರೆ. ಅವರಿಗೆ ಈ ಮೇಳ ಯಾವ ರೀತಿ ಸಹಕಾರಿಯಾಗಲಿದೆ?

ಪ್ರಸ್ತುತ ಸಣ್ಣ ಹಿಡುವಳಿದಾರರ ಪ್ರಮುಖ ಸಮಸ್ಯೆ ಎಂದರೆ, ಕೂಲಿ ಕಾರ್ಮಿಕರದ್ದು. ಅದಕ್ಕೆ ಪರಿಹಾರವಾಗಿ ಅವರಿಗೆ ಯಂತ್ರಗಳ ಅವಶ್ಯಕತೆ ಇದೆ. ಆದರೆ, ದೊಡ್ಡ ಯಂತ್ರಗಳನ್ನು ಖರೀದಿಸುವುದು ಕಷ್ಟ. ಈ ಹಿನ್ನೆಲೆಯಲ್ಲಿ ಸಣ್ಣ ಯಂತ್ರಗಳನ್ನು ಮೇಳದಲ್ಲಿ ಪ್ರದರ್ಶನಕ್ಕಿಡುತ್ತೇವೆ. ಜತೆಗೆ, ಪ್ರಾತ್ಯಕ್ಷಿಕೆಯೂ ಇರುತ್ತದೆ. ಸಮಗ್ರ ವ್ಯವಸಾಯ ಪದ್ಧತಿ ಅಳವಡಿಸಲು ಅವರಿಗೆ ಮಾರ್ಗದರ್ಶನ ನೀಡಲಾಗುತ್ತದೆ. ಬೆಳೆ ಜತೆಗೆ ಉಪಕಸುಬಾಗಿ ಕುರಿ, ಕೋಳಿ ಮತ್ತು ಮೀನು ಸಾಕಣೆಯ ಕುರಿತು ಮಾಹಿತಿ ನೀಡಲಾಗುತ್ತದೆ. ಬೆಳೆ ಕೈಕೊಟ್ಟರೂ, ಈ ಉಪಕಸುಬುಗಳು ರೈತರನ್ನು ಆರ್ಥಿಕವಾಗಿ ಕೈಹಿಡಿಯುತ್ತವೆ. ಈಗಾಗಲೇ ಕೋಲಾರ, ಚಿಕ್ಕಬಳ್ಳಾಪುರದಂತಹ ಬರ ಪೀಡಿತ ಪ್ರದೇಶಗಳಲ್ಲಿ ಈ ಬಗ್ಗೆ ಸುಮಾರು 18 ಸಾವಿರ ರೈತರಿಗೆ ಅರಿವು ಮೂಡಿಸಲಾಗಿದೆ. ರೈತರಿಗಷ್ಟೇ ಅಲ್ಲದೇ ಒಂದು ಲಕ್ಷಕ್ಕೂ ಹೆಚ್ಚು ಸಾರ್ವಜನಿಕರಿಗೂ ಮಾಹಿತಿ ನೀಡಿದ್ದೇವೆ. ಈ ವಿಧಾನವನ್ನು ಅಳವಡಿಸಿಕೊಂಡವರು ಉತ್ತಮ ಆದಾಯ ಗಳಿಸುತ್ತಿದ್ದಾರೆ.

● ಸಹಕಾರ ಕೃಷಿಗಿಂತ ಒಪ್ಪಂದ ಕೃಷಿ (ಕಾಂಟ್ರಾಕ್ಟ್ ಫಾರ್ಮಿಂಗ್) ಹೆಚ್ಚು ಪ್ರಚಲಿತವಾಗುತ್ತಿದೆ. ಈ ಬಗ್ಗೆ ನಿಮ್ಮ ಅಭಿಪ್ರಾಯವೇನು ?

ಒಪ್ಪಂದ ಕೃಷಿಯಲ್ಲಿ ಹೆಚ್ಚು ಲಾಭವಿದೆ. ಹೀಗಾಗಿ ಸಹಜವಾಗಿ ರೈತರು ಅದರತ್ತ ಆಕರ್ಷಿತರಾಗುತ್ತಿದ್ದಾರೆ. ಬೀಜ, ಗೊಬ್ಬರ ಮತ್ತು ತಾಂತ್ರಿಕ ಸಹಕಾರ ನೀಡುವುದರ ಜೊತೆಗೆ, ಮಾರುಕಟ್ಟೆ ದರಕ್ಕಿಂತ ಹೆಚ್ಚಿನ ದರದಲ್ಲಿ ಕೃಷಿ ಉತ್ಪನ್ನಗಳನ್ನು ಖರೀದಿಸುವ ಕುರಿತು ಕಂಪನಿಗಳು ರೈತರೊಂದಿಗೆ ಒಪ್ಪಂದ ಮಾಡಿಕೊಳ್ಳುತ್ತವೆ. ಇದರಿಂದ ಇಬ್ಬರಿಗೂ ಲಾಭ. ರೈತರಿಗೆ ಒಪ್ಪಂದ ಕೃಷಿಯ ಸಾಧಕ-ಬಾಧಕಗಳ ಕುರಿತ ಮಾಹಿತಿಯನ್ನು ಕೂಡ ನೀಡಲಾಗುವುದು.

● ಕೃಷಿ ಉತ್ಪನ್ನಗಳಿಗೆ ಸೂಕ್ತ ಬೆಲೆ ಸಿಗುತ್ತಿಲ್ಲ. ಆನ್‌ಲೈನ್ ಪಾವತಿ ವ್ಯವಸ್ಥೆಯೂ ಸರಿಯಾಗಿ ಅನುಷ್ಠಾನವಾಗುತ್ತಿಲ್ಲ ಎಂಬ ಅಕ್ಷೇಪಗಳಿವೆ. ಈ ಕುರಿತು ಕೃಷಿ ವಿಶ್ವವಿದ್ಯಾಲಯದ ಏನು ಹೇಳುತ್ತದೆ?

ರೈತರು ಬೆಳೆದ ಕೃಷಿ ಉತ್ಪನ್ನಗಳನ್ನು ಆನ್‌ಲೈನ್ ಮೂಲಕವೇ ಖರೀದಿ ಮತ್ತು ಪಾವತಿ ವ್ಯವಸ್ಥೆ ಜಾರಿಗೆ ಬಂದರೆ ಅನುಕೂಲ ವಾಗುತ್ತದೆ. ಈ ನಿಟ್ಟಿನಲ್ಲಿ ನೇರ ನಗದು ವರ್ಗಾವಣೆ (ಡಿಬಿಟಿ) ವ್ಯವಸ್ಥೆ ರೂಢಿಸಿಕೊಳ್ಳಲು ವಿಶ್ವವಿದ್ಯಾಲಯ ಸಲಹೆ ನೀಡಲಿದೆ. ಈ ವ್ಯವಸ್ಥೆ ಬಂದರೆ ಯಾವ ಉದ್ದೇಶಕ್ಕೆ ಹಣ ನೀಡಲಾಗಿದೆಯೋ, ಅದೇ ಉದ್ದೇಶಕ್ಕೆ ಮಾತ್ರ ಆ ಹಣ ಬಳಕೆಯಾಗುತ್ತದೆ.

● ವಿಶ್ವವಿದ್ಯಾಲಯದಸಂಶೋಧನೆಗಳು ರೈತರ ಹೊಲ ತಲುಪುತ್ತಿಲ್ಲ (ಲ್ಯಾಬ್ ಟು ಲ್ಯಾಂಡ್) ಎಂಬ ಮಾತುಗಳು ಕೇಳಿಬರುತ್ತಿವೆ. ಈ ವಿಷಯದಲ್ಲಿ ನಿಮ್ಮ ಅಭಿಪ್ರಾಯವೇನು?

ಈ ಮಾತು ಒಪ್ಪುವಂಥದ್ದಲ್ಲ. ವಿಶ್ವವಿದ್ಯಾಲಯದಲ್ಲಿ ನಡೆಯುವ ಎಲ್ಲ ಸಂಶೋಧನೆಗಳನ್ನು ಕೃಷಿ ಮೇಳ, ಕೃಷಿ ವಿಜ್ಞಾನ ಕೇಂದ್ರ ಮತ್ತು ಕೃಷಿ ಇಲಾಖೆ ಮೂಲಕ ರೈತರಿಗೆ ತಲುಪಿಸಲಾಗುತ್ತಿದೆ. ಮಾತ್ರವಲ್ಲ, ರೇಡಿಯೊ, ದೂರದರ್ಶನದ ಮೂಲಕ ಪ್ರಾತ್ಯಕ್ಷಿಕೆ ನೀಡಲಾಗುತ್ತಿದೆ. ಯಾವುದೇ ಹೊಸ ತಂತ್ರಜ್ಞಾನವಿದ್ದರೂ ಮೊಬೈಲ್ ಆ್ಯಪ್ ಮೂಲಕ ಕೆವಿಕೆಯಿಂದ ರೈತರಿಗೆ ಮಾಹಿತಿ ನೀಡಲಾಗುತ್ತಿದೆ.

ಪ್ರಸ್ತುತ ಕೃಷಿ ಮೇಳದಲ್ಲಿಯೂ ನೂತನವಾಗಿ ಬಿಡುಗಡೆಯಾದ ಏಳು ತಳಿಗಳ ಪ್ರಾತ್ಯಕ್ಷಿಕೆ, ಹವಾಮಾನ ವೈಪರೀತ್ಯ ಕೃಷಿ ಮಾಹಿತಿ, ಸುಧಾರಿತ ಕೃಷಿ ಯಂತ್ರೋಪಕರಣಗಳ ಪ್ರದರ್ಶನಗಳನ್ನು ಇದೇ ಕಾರಣಕ್ಕಾಗಿ ಆಯೋಜಿಸಲಾಗಿದೆ.

ಸುದ್ದಿ 2 ನಿಮಿಷ

ಅಕ್ರಮ ಕಟ್ಟಡ: ವರದಿ ಸಲ್ಲಿಸಲು ಹೈಕೋರ್ಟ್ ಆದೇಶ

ಬೆಂಗಳೂರು: 'ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ (ಬಿಬಿಎಂಪಿ) ವ್ಯಾಪ್ತಿಯಲ್ಲಿನ ಬೃಹತ್ ಸಂಖ್ಯೆಯ ಅಕ್ರಮ ಕಟ್ಟಡಗಳ ನೆಲಸಮ ಮಾಡುವಲ್ಲಿ ಏನು ಕ್ರಮ ಕೈಗೊಳ್ಳಲಾಗಿದೆ ಎಂಬ ಬಗ್ಗೆ ನವೆಂಬರ್ 15ಕ್ಕೆ ವರದಿ ಸಲ್ಲಿಸಿ' ಎಂದು ಹೈಕೋರ್ಟ್ ಆದೇಶಿಸಿದೆ.

ಈ ಕುರಿತಂತೆ ದಾಖಲಿಸಿಕೊಂಡಿರುವ ಸ್ವಯಂ ಪ್ರೇರಿತ ಸಾರ್ವಜನಿಕ ಹಿತಾಸಕ್ತಿ ಅರ್ಜಿಯನ್ನು ಮುಖ್ಯ ನ್ಯಾಯಮೂರ್ತಿ ಅಭಯ್ ಎಸ್. ಓಕಾ ಹಾಗೂ ನ್ಯಾಯಮೂರ್ತಿ ಎಸ್.ಆರ್.ಕೃಷ್ಣಕುಮಾರ್ ಅವರಿದ್ದ ವಿಭಾಗೀಯ ನ್ಯಾಯಪೀಠ ಸೋಮವಾರ ವಿಚಾರಣೆ ನಡೆಸಿತು.

ವಿಚಾರಣೆ ವೇಳೆ ಬಿಬಿಎಂಪಿ ಪರ ವಕೀಲ ಕೆ.ಎನ್.ಪುಟ್ಟೇಗೌಡ ಅವರು, 'ಈ ಸಂಬಂಧ ಬಿಬಿಎಂಪಿ ಎಷ್ಟು ವ್ಯಾಜ್ಯಗಳಲ್ಲಿ ಮೇಲ್ಮನವಿ ಸಲ್ಲಿಸಿದೆ ಮತ್ತು ಏನೆಲ್ಲಾ ಕ್ರಮ ಕೈಗೊಳ್ಳಲಾಗಿದೆ ಎಂಬ ಬಗ್ಗೆ ಸಂಪೂರ್ಣ ವಿವರ ದೊರೆತಿಲ್ಲ. ಆದ್ದರಿಂದ ಕಾಲಾವಕಾಶ ನೀಡಬೇಕು' ಎಂದು ಕೋರಿದರು.

ಇದನ್ನು ಮಾನ್ಯ ಮಾಡಿದ ನ್ಯಾಯಪೀಠ, ಇದೇ ಕೊನೆಯ ಅವಕಾಶ. ನವೆಂಬರ್ 14ಕ್ಕೆ ವಿವರವಾದ ವರದಿ ಸಲ್ಲಿಸಿ' ಎಂದು ಸೂಚಿಸಿ ವಿಚಾರಣೆಯನ್ನು ನವೆಂಬರ್ 18ಕ್ಕೆ ಮುಂದೂಡಿದೆ.

ಶಾಸಕ ಎಸ್.ಎ.ರಾಮದಾಸ್‌ಗೆ ವಿಶೇಷ ಕೋರ್ಟ್ ಸಮನ್ಸ್

ಬೆಂಗಳೂರು: ಮದುವೆಯಾಗುವುದಾಗಿ ಪ್ರೇಮಕುಮಾರಿ ಅವರನ್ನು ನಂಬಿಸಿ ವಂಚಿಸಿದ ಆರೋಪಕ್ಕೆ ಸಂಬಂಧಿಸಿದಂತೆ ಮೈಸೂರು ಕೃಷ್ಣರಾಜ ವಿಧಾನಸಭಾ ಕ್ಷೇತ್ರದ ಬಿಜೆಪಿ ಶಾಸಕ ಎಸ್.ಎ.ರಾಮದಾಸ್ ವಿರುದ್ಧ ಕ್ರಿಮಿನಲ್ ಪ್ರಕರಣ ದಾಖಲಿಸಿಕೊಂಡಿರುವ ಜನಪ್ರತಿನಿಧಿಗಳ ನ್ಯಾಯಾಲಯ ನವೆಂಬರ್ 11ಕ್ಕೆ ಹಾಜರಾಗುವಂತೆ ಸಮನ್ಸ್ ಜಾರಿಗೊಳಿಸಿದೆ.

ಈ ಕುರಿತಂತೆ 'ಶಾಸಕರು-ಸಂಸದರ ವಿರುದ್ಧದ ಕ್ರಿಮಿನಲ್ ಪ್ರಕರಣಗಳ ವಿಚಾರಣೆಯ ವಿಶೇಷ ನ್ಯಾಯಾಲಯ'ದ ನ್ಯಾಯಾಧೀಶ ರಾಮಚಂದ್ರ ಡಿ. ಹುದ್ದಾರ ಅವರು ಸೋಮವಾರ ಆದೇಶಿಸಿದರು. ರಾಮದಾಸ್ ವಿರುದ್ಧ ಮೈಸೂರಿನ ಸರಸ್ವತಿಪುರಂ ಠಾಣೆಯಲ್ಲಿ 2014ರ ಫೆಬ್ರುವರಿ 14ರಂದು ಪ್ರೇಮಕುಮಾರಿ ದೂರು ನೀಡಿದ್ದರು.

ಯಾವತ್ತೂ ಹೀಗಾಗಿರಲಿಲ್ಲ: ಬೇಸರ ತೋಡಿಕೊಂಡ ಮಾಜಿ ಮೇಯರ್‌ಗಳು

ಗಂಟೆಗಟ್ಟಲೆ ಕಾಯಿಸಿದ ಮೇಯರ್

ಪ್ರಜಾವಾಣಿ ವಾರ್ತೆ

ಬೆಂಗಳೂರು: ಬಿಬಿಎಂಪಿ ಆಡಳಿತಕ್ಕೆ ಸಂಬಂಧಿಸಿ ಸಲಹೆ ಪಡೆಯಲು ಮಾಜಿ ಮೇಯರ್‌ಗಳನ್ನು ಸೋಮವಾರ ತಮ್ಮ ಕಚೇರಿಗೆ ಆಹ್ವಾನಿಸಿದ್ದ ಮೇಯರ್ ಎಂ.ಗೌತಮ್ ಕುಮಾರ್, ಅವರನ್ನು ತಾಸುಗಟ್ಟಲೆ ಕಾಯಿಸಿದರು. ಕಾದು ಸುಸ್ತಾದ ಮಾಜಿ ಮೇಯರ್‌ಗಳು ಸಭೆ ಆರಂಭವಾಗುವುದಕ್ಕೆ ಮುನ್ನವೇ ನಿರ್ಗಮಿಸುವ ಮೂಲಕ ಪಕ್ಷಭೇದ ಮರೆತು ಪ್ರತಿಭಟನೆ ವ್ಯಕ್ತಪಡಿಸಿದರು.

ಮಧ್ಯಾಹ್ನ 12.30ಕ್ಕೆ ಕರೆಯಲಾದ ಈ ಸಭೆಗೆ ಮಾಜಿ ಮೇಯರ್‌ಗಳಾದ ಸಂಪತ್‌ರಾಜ್, ಜಿ.ಪದ್ಮಾವತಿ, ಪದ್ಮನಾಭ ರೆಡ್ಡಿ, ಶಾಂತಕುಮಾರಿ, ಎಸ್.ಕೆ.ನಟರಾಜ್, ಬಿ.ಎಸ್. ಸತ್ಯನಾರಾಯಣ, ಹುಚ್ಚಪ್ಪ, ರಾಮಚಂದ್ರಪ್ಪ, ಲಕ್ಕಣ್ಣ ಮುಂತಾದವರು ಬಂದಿದ್ದರು. ಅವರ ಮಧ್ಯಾಹ್ನ 1.45ರವರೆಗೆ ಕಾದರೂ ಮೇಯರ್ ಬಂದಿರಲಿಲ್ಲ. ಈ ಬಗ್ಗೆ ಮಾಜಿ ಮೇಯರ್‌ಗಳು 'ಪ್ರಜಾವಾಣಿ' ಜೊತೆ ಅಸಮಾಧಾನ ತೋಡಿಕೊಂಡರು.

ಯಾವತ್ತೂ ಹೀಗಾಗಿರಲಿಲ್ಲ: 'ಮೇಯರ್ ಹುದ್ದೆಗೆ ಅದರದ್ದೇ ಆದ ಘನತೆ ಇದೆ. ಬಿಬಿಎಂಪಿಯ ಇತಿಹಾಸದಲ್ಲಿ ಯಾವತ್ತೂ ಯಾವ ಮೇಯರ್ ಕೂಡಾ ಮಾಜಿ ಮೇಯರ್‌ಗಳನ್ನು ಈ ರೀತಿ ನಡೆಸಿಕೊಂಡಿರಲಿಲ್ಲ. ನಮ್ಮನ್ನು ಸಭೆಗೆ ಆಹ್ವಾನಿಸಿ ಅವಮಾನ ಮಾಡಲಾಗಿದೆ' ಎಂದು ಮಾಜಿ ಮೇಯರ್ ಹುಚ್ಚಪ್ಪ ತಿಳಿಸಿದರು.

'ಈ ರೀತಿ ಆಗುತ್ತಿರುವುದು ಇದೇ ಮೊದಲಲ್ಲ. ಗಾಂಧಿ ಜಯಂತಿಯಂದು ನಡೆದ ಸರ್ವಧರ್ಮ ಪ್ರಾರ್ಥನೆಯ ಸಂದರ್ಭದಲ್ಲೂ ಮೇಯರ್ ಇದೇ ರೀತಿ ವರ್ತಿಸಿದ್ದರು. ಆ ಕಾರ್ಯಕ್ರಮಕ್ಕೆ ತಡವಾಗಿ ಬಂದಿದ್ದು ಅಲ್ಲದೇ ಅರ್ಧದಲ್ಲೇ ನಿರ್ಗಮಿಸಿದ್ದರು. ಅವರು ಹುದ್ದೆಯ ಘನತೆಯನ್ನು ಅರಿತು ವರ್ತಿಸಬೇಕು' ಎಂದು ಕಿವಿಮಾತು ಹೇಳಿದರು.

'ಮಾಜಿ ಮೇಯರ್‌ಗಳಿಂದ ಮೇಯರ್ ಸಲಹೆ ಪಡೆಯುವುದು ಹಿಂದಿನಿಂದಲೂ ನಡೆದು ಬಂದ ಸಂಪ್ರದಾಯ. ನಮ್ಮನ್ನು ಸಭೆಗೆ ಕರೆಸಿ ಕಾಯಿಸಬಾರದಿತ್ತು. ಮುಖ್ಯಮಂತ್ರಿ ಬಿ.ಎಸ್.ಯಡಿಯೂರಪ್ಪ ಕರೆದ ಸಭೆಯಲ್ಲಿ ಭಾಗವಹಿಸುವುದಾದರೆ ನಮಗೆ ಈ ಬಗ್ಗೆ ಮಾಹಿತಿ ನೀಡಿ, ಸಭೆಯನ್ನು ಮುಂದೂಡಬಹುದಿತ್ತು. ಕನಿಷ್ಠ ಪಕ್ಷ ತಮ್ಮ ಆಪ್ತಸಹಾಯಕರ ಮೂಲಕವಾದರೂ ಸಂದೇಶ ತಲುಪಿಸಬಹುದಿತ್ತು' ಎಂದು ಜಿ.ಪದ್ಮಾವತಿ ತಿಳಿಸಿದರು.

'ಮುಖ್ಯಮಂತ್ರಿ ಕರೆದ ಸಭೆಯಲ್ಲಿ ಭಾಗವಹಿಸಬೇಕಾಗಿ ಬಂದಿದ್ದರಿಂದ ಈ ರೀತಿ ಆಗಿದೆ. ಇನ್ನೊಮ್ಮೆ ಸಭೆ ಕರೆಯುವುದಾಗಿ ಮೇಯರ್ ತಿಳಿಸಿದ್ದಾರೆ. ಇಂತಹ ಪ್ರಸಂಗ ಮರುಕಳಿಸದಂತೆ ಎಚ್ಚರ ವಹಿಸಬೇಕು' ಎಂದು ಬಿ.ಎಸ್. ಸತ್ಯನಾರಾಯಣ ಹೇಳಿದರು.

'ಕೆಲವು ಮಾಜಿ ಮೇಯರ್‌ಗಳಿಗೆ ಮಧುಮೇಹ ಕಾಯಿಲೆಯೂ ಇತ್ತು. ಮೇಯರ್ ಈಗ ಬರುತ್ತಾರೆ ಎಂದು ಅವರ ಕಚೇರಿ ಸಿಬ್ಬಂದಿ ಹೇಳುತ್ತಲೇ ಇದ್ದರು. ಮಧ್ಯಾಹ್ನ 1.45ರವರೆಗೆ ಉಪಾಹಾರವನ್ನೂ ನೀಡಲಿಲ್ಲ. ನಾವೆಲ್ಲ ನಿರ್ಗಮಿಸಲು ಮುಂದಾದ ಬಳಿಕ ಊಟವನ್ನು ತರಿಸಿದರು. ಸೌಜನ್ಯಕ್ಕೂ ಕ್ಷಮೆ ಕೇಳಲಿಲ್ಲ' ಎಂದು ಹೆಸರು ಹೇಳಿಕೊಳ್ಳಲು ಬಯಸದ ಮಾಜಿ ಮೇಯರ್ ಒಬ್ಬರು ಬೇಸರ ವ್ಯಕ್ತಪಡಿಸಿದರು.

'ಸಿ.ಎಂ. ಸಭೆ ತಡವಾಗಿದ್ದಕ್ಕೆ ಸಮಸ್ಯೆ'

'ಕಸ ವಿಲೇವಾರಿ ಸೇರಿದಂತೆ ಬಿಬಿಎಂಪಿಗೆ ಸಂಬಂಧಿಸಿದ ವಿವಿಧ ವಿಚಾರಗಳ ಬಗ್ಗೆ ಚರ್ಚಿಸಲು ಮುಖ್ಯಮಂತ್ರಿಯವರು ಸಭೆ ಕರೆದಿದ್ದರು. ಈ ಸಭೆಯೂ ಮುಂಚಿತವಾಗಿಯೇ ನಿಗದಿಯಾಗಿತ್ತು. 12.30ಕ್ಕೆ ಸಭೆ ಮುಗಿಯಬಹುದು ಎಂದು ಭಾವಿಸಿ ಮಾಜಿ ಮೇಯರ್‌ಗಳ ಸಭೆಯನ್ನು 1 ಗಂಟೆಗೆ ನಿಗದಿಪಡಿಸಿದ್ದೆ. ಮುಖ್ಯಮಂತ್ರಿ ನೇತೃತ್ವದ ಸಭೆ ವಿಳಂಬವಾಗಿದ್ದರಿಂದ ಸಮಸ್ಯೆಯಾಯಿತು' ಎಂದು ಗೌತಮ್ ಕುಮಾರ್ 'ಪ್ರಜಾವಾಣಿ'ಗೆ ತಿಳಿಸಿದರು.

ಸಂಕ್ಷಿಪ್ತ ಸುದ್ದಿ

31ಕ್ಕೆ ವಾಹನಗಳ ಹರಾಜು

ಬೆಂಗಳೂರು: ವಿ.ವಿ.ಪುರ ಸಂಚಾರ ಠಾಣೆ ಪೊಲೀಸರು ವಿವಿಧ ಪ್ರಕರಣಗಳಲ್ಲಿ ಜಪ್ತಿ ಮಾಡಿರುವ ದ್ವಿಚಕ್ರ ವಾಹನಗಳ ಹರಾಜು ಪ್ರಕ್ರಿಯೆ ನ್ಯಾಯಾಲಯದ ನಿರ್ದೇಶನದಂತೆ ಅ. 31ರಂದು ಮಧ್ಯಾಹ್ನ 12ಕ್ಕೆ ನಡೆಯಲಿದೆ. ಮಾಹಿತಿಗೆ 080-22942670, 9480801926.

ಕೆಆರ್‌ಎಸ್ ಅಭ್ಯರ್ಥಿಗಳ ಪಟ್ಟಿ ಬಿಡುಗಡೆ

ಬೆಂಗಳೂರು: 15 ವಿಧಾನಸಭಾ ಕ್ಷೇತ್ರಗಳ ಉಪಚುನಾವಣೆಯಲ್ಲಿ ಸ್ಪರ್ಧಿಸಲಿರುವ ಅಭ್ಯರ್ಥಿಗಳ ಮೊದಲ ಪಟ್ಟಿಯನ್ನು ಕರ್ನಾಟಕ ರಾಷ್ಟ್ರ ಸಮಿತಿ ಬಿಡುಗಡೆಗೊಳಿಸಿದೆ.

ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಪಕ್ಷದ ರಾಜ್ಯ ಘಟಕದ ಅಧ್ಯಕ್ಷ ರವಿಕೃಷ್ಣಾರೆಡ್ಡಿ, 'ಗಿರೀಶ್ ಪಿ. (ಮಹಾಲಕ್ಷ್ಮಿ ಲೇಔಟ್), ಜಗದೀಶ್ (ಕೆ.ಆರ್.ಪುರ), ಜಯದೇವ ಕೆರೂಡಿ (ಹಿರೇಕೆರೂರು), ಪ.ಯ.ಗಣೇಶ್ (ವಿಜಯನಗರ), ಪ್ರಶಾಂತ್ ಭಜಂತ್ರಿ (ಕಾಗವಾಡ), ಕೆ.ಎನ್.ಶಂಕರೇಗೌಡ (ಕೆ.ಆರ್.ಪೇಟೆ), ತಿಮ್ಮಾ ಬೋವಿ (ಹುಣಸೂರು) ಸ್ಪರ್ಧೆ ಮಾಡಲಿದ್ದಾರೆ' ಎಂದು ತಿಳಿಸಿದರು.

ಆರ್‌ಎಂಕೆವಿ ರೇಷ್ಮೆ ಸೀರೆ ಬಿಡುಗಡೆ

ಬೆಂಗಳೂರು: ಹಬ್ಬಗಳ ಋತುವಿಗಾಗಿ ಆರ್‌ಎಂಕೆವ